# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ವಾರ್ಡ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 08-11-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
8. ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿನ ಮತದಾರರ ಪಟ್ಟಿಯಲ್ಲಿರುವ ಹೆಸರುಗಳನ್ನು ಪರಿಶೀಲಿಸಿ, ಮನೆಗಳಲ್ಲಿ ವಾಸವಿಲ್ಲದೇ ಇರುವವರನ್ನು ಗುರುತಿಸಿ, ಪರಿಶೀಲಿಸಿ, ಅಂತಹವರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಮತ್ತು ಹೊಸದಾಗಿ ಮತದಾರರ ಪಟ್ಟಿಯಲ್ಲಿ ಅರ್ಹರ ಹೆಸರುಗಳನ್ನು ಸೇರ್ಪಡೆ ಮಾಡಲು ಹಾಗೂ ವರ್ಗಾವಣೆ ಮಾಡುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಕಂದಾಯ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.



Scanned with CamScanner

2) **ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)** ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆ, ಸುಖ್ ಸಾಗರ್ ಹೋಟೆಲ್ ರಸ್ತೆ ಮತ್ತು 5ನೇ ಮುಖ್ಯರಸ್ತೆಯಲ್ಲಿ ರಾತ್ರಿ ವೇಳೆಯಲ್ಲಿ ಅನಾಮಧೇಯ ವ್ಯಕ್ತಿಗಳು ರಸ್ತೆಗಳಲ್ಲಿ ಧೂಮಪಾನ ಮತ್ತು ಮದ್ಯಪಾನ ಸೇವಿಸುವುದು, ಅನೈತಿಕ ಚಟುವಟಿಕೆಗಳಲ್ಲಿ ಭಾಗಿಯಾಗುವುದು ಕಂಡುಬರುತ್ತಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಈ ಬಗ್ಗೆಕೂಲಂಕುಷವಾಗ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ, ಸಹಾಯಕ ಸಬ್ ಇನ್ಸ್‌ಪೆಕ್ಟರ್ ಕಾನೂನು ಸುವ್ಯವಸ್ಥೆ ರವರು ಮಾತನಾಡಿ, ರಾತ್ರಿ ಸಮಯದಲ್ಲಿ ಹೊಯ್ಸಳ ವಾಹನದ ಗಸ್ತನ್ನು ಹೆಚ್ಚಿಸಿ, ತೀವ್ರಗೊಳಿಸಿ, ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಲಾಗುವುದು ಎಂದು ಸಭೆಗೆ ತಿಳಿಸಿದರು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ರವರು ಮಾತನಾಡಿ,** ರಾಮಯ್ಯ ಬಡಾವಣೆಯಲ್ಲಿ ನೀರು ಸರಬರಾಜು ಉತ್ತಮವಾಗಿದ್ದು, ಒಳಚರಂಡಿಯಲ್ಲಿ ಪದೇ ಪದೇ ನೀರು ಸರಾಗವಾಗಿ ಹರಿಯದೇ ಬ್ಲಾಕ್ ಆಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

4) **ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ಹೆಚ್.ಬಿ.ಆರ್ ಪ್ರದೇಶದಲ್ಲಿ ಎರಡು ಕಡೆ ನೀರು ಸರಬರಾಜು ಪೈಪ್‌ಲೈನ್ ದುರಸ್ಥಿಯಾಗಿರುತ್ತದೆ ಮತ್ತು ಈ ಪ್ರದೇಶದಲ್ಲಿ ಕೆಲವು ಕಡೆ ಮ್ಯಾನುವಲ್ ಚೇಂಬರ್‌ಗಳು ರಸ್ತೆ ಮಟ್ಟಕ್ಕಿಂತ ಎತ್ತರಕ್ಕೆ ಹಾಗೂ ರಸ್ತೆ ಮಟ್ಟಕ್ಕಿಂತ ಕೆಳಮಟ್ಟಕ್ಕೆ ಇದ್ದು, ಈ ಚೆಂಬರ್‌ಗಳನ್ನು ರಸ್ತೆಯ ಮಟ್ಟಕ್ಕೆ ನಿರ್ಮಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಹೆಚ್.ಬಿ.ಆರ್ ಪ್ರದೇಶವನ್ನು ಪರಿಶೀಲಿಸಿ, ನೀರು ಸರಬರಾಜು ಪೈಪ್‌ಲೈನ್ ದುರಸ್ಥಿಪಡಿಸುವುದು, ಹಾಗೂ ಚೇಂಬರ್‌ಗಳನ್ನು ರಸ್ತೆಯ ಮಟ್ಟಕ್ಕೆ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

5) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯ ಕಾಂತಿ ಸ್ವೀಟ್ ರಸ್ತೆ ಹಾಗೂ ಸತ್ಯ ಆಸ್ಪಿಟಲ್ ರಸ್ತೆಗಳಲ್ಲಿ ಸುಮಾರು 08 ವಿದ್ಯುತ್ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸಭೆಯ ಗಮನಕ್ಕೆ ತಂದಾಗ, ಸಭೆಯಲ್ಲಿ ವಿದ್ಯುತ್ ಬೀದಿ ದೀಪಗಳ ವಿಭಾಗದವರು ಗೈರಾಗಿದ್ದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಿ, ಕ್ರಮ ಕೈಗೊಳ್ಳಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

6) **ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಪರೀಕ್ಷೆಗಳಿಗೆ ಒಳಪಟ್ಟ 1365 ಪ್ರಕರಣಗಳಿದ್ದು, ಈ ಪೈಕಿ 01 ಪ್ರಕರಣ ಮಾತ್ರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 42873 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

Scanned with CamScanner

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಪ್ರತಿಯನ್ನು

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner